ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ: 14ನೇ ಡಿಸೆಂಬರ್, 2020

ಶಿಕ್ಷಕರು ಮತ್ತು ಉಪನ್ಯಾಸಕರ ವಿಶೇಷ ಭತ್ಯೆ ಬಗ್ಗೆ

ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :-

594(624) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ದಿನಾಂಕ:01-08-2008ರ ನಂತರ ನೇಮಕಾತಿ ಹೊಂದಿದ ಸರ್ಕಾರಿ ಅನುದಾನಿತ ಪ್ರೌಢಶಾಲಾ ಶಿಕ್ಷಕರು ಮತ್ತು ಉಪನ್ಯಾಸಕರುಗಳಿಗೆ ವಿಶೇಷ ಭತ್ಯೆಯನ್ನು ಮಂಜೂರು ಮಾಡಲಾಗಿದೆಯೇ;

(ಆ) ಇವರಿಗೆ ವಿಶೇಷ ಭತ್ಯೆಯನ್ನು ಹೆಚ್ಚುವರಿಯಾಗಿ ನೀಡಲಾದ ಪ್ರಕರಣಗಳಲ್ಲಿ ವಿಶೇಷ ಭತ್ಯೆಯನ್ನು ವಸೂಲಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ನ್ಯಾಯಾಲಯಗಳಲ್ಲಿ ವಿಶೇಷ ಭತ್ಯೆ ವಸೂಲು ಮಾಡಲು ಸೂಚಿಸಿರುವ ಆದೇಶವನ್ನು ಹಿಂಪಡೆಯಲು ತೀರ್ಪು ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಬಂದಿದ್ದಲ್ಲಿ, ವಸೂಲಾತಿ ಆದೇಶವನ್ನು ಹಿಂಪಡೆಯಲು ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು)